ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 4/2021

(ಫ್ರಾಸಾ-8 ಚಾಸಾ-8 )
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 28.04.2026

| | | |
|---|---|---|
| ಸಾಕ್ಷಿದಾರರ ಹೆಸರು | - | ನಾಗರಾಜು |
| ತಂದೆಯ ಹೆಸರು | - | ದೊಡ್ಡಪ್ಪಯ್ಯ |
| ವಯಸ್ಸು | - | 48 ವರ್ಷ, |
| ಉದ್ಯೋಗ | - | ವ್ಯವಸಾಯ |
| ವಾಸ | - | ಗಂಗಾವರ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಸದರಿ ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಸದರಿ ದಾಖಲೆ ನಿಶಾನೆ ಪಿ-2 ಪಂಚನಾಮೆ ಇದ್ದು ಅದರಲ್ಲಿರುವ ಸಾಕ್ಷಿ ಸಹಿಯನ್ನು ನಿಶಾನೆ ಪಿ-2(ಬಿ) ಎಂದು ಗುರುತಿಸಲಾಯಿತು. ಈಗ ಸುಮಾರು 4-5 ವರ್ಷಗಳ ಹಿಂದೆ ನಾನು ಗಂಗಾವರದ ನನ್ನ ಜಮೀನಿನ ಬಳಿ ಹೋಗುತ್ತಿದ್ದಾಗ ರಾಜಣ್ಣದ ಜಮೀನಿನ ಬಳಿ ಈಗ ತೋರಿಸಿದ ನಿಪಿ-2 ದಾಖಲೆಗೆ ಪೋಲಿಸರು ನನ್ನ ಸಹಿ ಪಡೆದಿರುತ್ತಾರೆ. ನಿಶಾನೆ ಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಪಂಚನಾಮೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

2. ದಿಃ02.10.2020 ರಂದು ಆರೋಪಿಯ ಜಮೀನಿನ ಬಳಿ ಚಾಸಾ-1 ವಎತಪ್ತ ಅರೋಪಿಗೆ ಜಗಳ ಆಗಿರುವ ವಿಚಾರವಾಗಿ ಪೋಲಿಸರು ಚಾಸಾ-1 ರವರು ತೋರಿಸಿದ ಕೃತ್ಯ ನಡೆದ ಸ್ಥಳದಲ್ಲಿ ನಿಶಾನೆ ಪಿ-2 ರಂತೆ ಸ್ಥಳ ಪಂಚನಾಮೆಯನ್ನು ನನ್ನ ಹಾಗೂ ಚಾಸಾ-3

ಮತ್ತು 7 ರವರ ಸಮಕ್ಷಮ ಬೆಳಗ್ಗೆ 8 ರಿಂದ 9.30 ಘಂಟೆಯವರೆಗೆ ಪಂಚನಾಮೆ ಜರುಗಿಸಿದ್ದುಚಾಸಾ-3 ರವರು ಹಾಜರುಪಡಿಸಿದ ಮು.ಮಾ-1 ಮತ್ತು 2 ನೀಲಗಿರಿ ದೊಣ್ಣೆಯನ್ನು ಅಮಾನತುಪಡಿಸಿಕೊಂಡು ಅದರಲ್ಲಿ ಬರೆದಿರುವ ವಿಷಯಗಳನ್ನು ನಮಗೆ ಓದಿ ಹೇಳಿದಾಗ ನಾವು ಅದರಲ್ಲಿ ಬರೆದಿರುವುದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆ ಪಿ-2 ರಂತೆ ನನ್ನ ಸಮಕ್ಷಮ ಪಂಚನಾಮೆ ಜರುಗಿಸಿದ್ದರೂ ಸಹ ಆರೋಪಿತರ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಪಿಡಿಪಿ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**ಮರುವಿಚಾರಣೆಃ ಇಲ್ಲ**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು